# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(ಸಿ1)ಪಿಆರ್/ 110 /2016-17

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 20/3/17

## ಸುತ್ತೋಲೆ

ವಿಷಯ: ಕಂಪ್ಯೂಟರ್ ಆಪರೇಟರ್‌ಗಳನ್ನು ನೇಮಿಸಿಕೊಳ್ಳುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸಕಾರ್ಯಗಳ ಹಿತದೃಷ್ಟಿಯಿಂದ ಕಂಪ್ಯೂಟರ್ ಆಪರೇಟರ್‌ಗಳ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿರುತ್ತದೆ. ಇತ್ತೀಚೆಗೆ ವಿವಿಧ ಕಛೇರಿಗಳಲ್ಲಿ ಬಟವಾಡೆ ಅಧಿಕಾರಿಗಳು / ಇಲಾಖಾ ಮುಖ್ಯಸ್ಥರುಗಳು ಆಯುಕ್ತರ ಕಛೇರಿಯ ಆಡಳಿತ ಶಾಖೆಯ ಪೂರ್ವಾನುಮತಿಯನ್ನು ಪಡೆಯದೇ ಹೊಸದಾಗಿ ಕಂಪ್ಯೂಟರ್ ಆಪರೇಟರ್‌ಗಳನ್ನು ನಿಯೋಜಿಸಿಕೊಂಡು, ತದನಂತರ ಸದರಿ ಕಂಪ್ಯೂಟರ್ ಆಪರೇಟರ್‌ಗಳನ್ನು ಇಂತಹ ದಿನಾಂಕದಿಂದ ನಿಯೋಜಿಸಿಕೊಂಡಿದ್ದು, ಸದರಿಯವರಿಗೆ ವೇತನ ಮತ್ತು ಇನ್ನಿತರೇ ಸೌಲಭ್ಯವನ್ನು ನೀಡುವಂತೆ ಆಯುಕ್ತರ ಕಛೇರಿಯ ಆಡಳಿತ ಶಾಖೆಗೆ ಪ್ರಸ್ತಾವನೆಗಳನ್ನು ಮಂಡಿಸಲಾಗುತ್ತಿರುವುದು ಹಾಗೂ ಹೊಸದಾಗಿ ನಿಯೋಜಿಸಿಕೊಂಡಿರುವ ಕಂಪ್ಯೂಟರ್ ಆಪರೇಟರ್‌ಗಳಿಗೆ ಸುಮಾರು ತಿಂಗಳುಗಳಿಂದ ವೇತನವನ್ನು ಪಾವತಿಸಿರುವುದಿಲ್ಲವೆಂದು, ಸುಮಾರು ತಿಂಗಳ ಹಾಜರಾತಿ ಪ್ರಮಾಣ ಪತ್ರಗಳನ್ನು ಒಟ್ಟಿಗೆ ಸಲ್ಲಿಸಿರುವುದು ಹಾಗೂ ವೇತನವನ್ನು ಪಾವತಿಸಿಲ್ಲವೆಂದು ಕಾರ್ಮಿಕ ಇಲಾಖೆಯಲ್ಲಿ ಮತ್ತು ಮಾನವ ಹಕ್ಕುಗಳ ಆಯೋಗದಲ್ಲಿ ದೂರುಗಳನ್ನು ಸಲ್ಲಿಸುತ್ತಿರುವುದು ಗಮನಿಸಲಾಗಿರುತ್ತದೆ.

ಒಂದು ಮಾಹೆಯಿಂದ ಮತ್ತೊಂದು ಮಾಹೆಗೆ ಕಂಪ್ಯೂಟರ್ ಆಪರೇಟರ್‌ಗಳ ಹಾಜರಾತಿ ಪ್ರಮಾಣ ಪತ್ರಗಳು ಗಣನೀಯವಾಗಿ ಹೆಚ್ಚಳವಾಗುತ್ತಿರುವುದು ಕಂಡು ಬಂದಿರುವುದರಿಂದ ಇನ್ನು ಮುಂದೆ ಯಾವುದೇ ಕಂಪ್ಯೂಟರ್ ಆಪರೇಟರ್‌ಗಳನ್ನು ನಿಯೋಜಿಸಿಕೊಳ್ಳುವ ಮುನ್ನ ಆಯುಕ್ತರ ಕಛೇರಿಯ ಆಡಳಿತ ಶಾಖೆಯ ಪೂರ್ವಾನುಮತಿ ಪಡೆದು, ತದನಂತರವೇ ನಿಯೋಜಿಸಿಕೊಳ್ಳಬೇಕು. ಒಂದು ವೇಳೆ ಆಯುಕ್ತರ ಕಛೇರಿಯ ಆಡಳಿತ ಶಾಖೆಯ ಪೂರ್ವಾನುಮತಿಯನ್ನು ಪಡೆಯದೇ ಕಂಪ್ಯೂಟರ್ ಆಪರೇಟರ್‌ಗಳಿಗೆ ನಿಯೋಜಿಸಿಕೊಂಡರೆ, ಅಂತಹ ಕಂಪ್ಯೂಟರ್ ಆಪರೇಟರ್‌ಗಳ ಹಾಜರಾತಿ ಪ್ರಮಾಣ ಪತ್ರವನ್ನು ಆಯುಕ್ತರ ಕಛೇರಿಯ ಆಡಳಿತ ಶಾಖೆಯಲ್ಲಿ ಸ್ವೀಕರಿಸುವುದಿಲ್ಲ ಮತ್ತು ಸದರಿ ಕಂಪ್ಯೂಟರ್ ಆಪರೇಟರ್‌ಗಳಿಗೆ ವೇತನ ಮತ್ತು ಇನ್ನಿತರೇ ಸೌಲಭ್ಯಗಳನ್ನು ನೀಡುವುದಿಲ್ಲವೆಂದು ಮತ್ತು ಈ ಸಂಬಂಧ ಕಾರ್ಮಿಕ ಇಲಾಖೆ / ಇನ್ನಿತರೇ ಆಯೋಗದಲ್ಲಿ ದೂರನ್ನು ಸಲ್ಲಿಸಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಜವಾಬ್ದಾರರನ್ನಾಗಿ ಮಾಡಲಾಗುವುದೆಂದು ಈ ಸುತ್ತೋಲೆ ಮೂಲಕ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ / ಇಲಾಖಾ ಮುಖ್ಯಸ್ಥರುಗಳಿಗೆ ತಿಳಿಯಪಡಿಸಿದೆ.

ಮಾನ್ಯ ಆಯುಕ್ತರವರ ಆದೇಶದಂತೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.

ಮು.ತಿ.ನೋ..

: ಆಯುಕ್ತರು / ವಿಶೇಷ ಆಯುಕ್ತರು (ಯೋಜನೆ/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿ ರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರಿಗೆ, ವಿರೋಧ ಪಕ್ಷದ ನಾಯಕರಿಗೆ ಕಳುಹಿಸಿಕೊಡಲು ಕೋರಿದೆ.

: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.

: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.

: ಮುಲೆಅ/ಮುಲೆಪ ರವರುಗಳಿಗೆ ಕಳುಹಿಸಿದೆ.

: ಎಲ್ಲಾ ವಲಯ ಸಹಾಯಕ ನಿಯಂತ್ರಕರು (ಹಣಕಾಸು) ರವರುಗಳಿಗೆ ಕಳುಹಿಸಿದೆ.

: ಕಛೇರಿ ಪ್ರತಿ

I. T. Adviser.